# ಆರ್. ದಿಲೀಪ್, ಶಿವಲಿಂಗಪ್ಪಗೆ ಸಾಹಿತ್ಯ ಅಕಾಡೆಮಿ ಪುರಸ್ಕಾರ

ಪ್ರಜಾವಾಣಿ ವಾರ್ತೆ



ದಿಲೀಪ್ ಕುಮಾರ್



ಶಿವಲಿಂಗಪ್ಪ ಹಂದಿಹಾಳು

ನವದೆಹಲಿ: ಕೇಂದ್ರ ಸಾಹಿತ್ಯ ಅಕಾಡೆಮಿಯ 2025ನೇ ಸಾಲಿನ 'ಯುವ ಪುರಸ್ಕಾರ'ವು ಯುವ ಲೇಖಕ ಆರ್. ದಿಲೀಪ್ ಕುಮಾರ್ ಅವರ 'ಪಚ್ಚೆಯ ಜಗುಲಿ' ವಿಮರ್ಶಾ ಸಂಕಲನಕ್ಕೆ ಹಾಗೂ 'ಬಾಲ ಸಾಹಿತ್ಯ ಪುರಸ್ಕಾರ'ವು ಲೇಖಕ ಕೆ.ಶಿವಲಿಂಗಪ್ಪ ಹಂದಿಹಾಳು ಅವರ 'ನೋಟ್ ಬುಕ್' ಮಕ್ಕಳ ಕಥಾಸಂಕಲನಕ್ಕೆ ಲಭಿಸಿದೆ. ಪ್ರಶಸ್ತಿ ಪುರಸ್ಕೃತರು ತಲಾ ₹50 ಸಾವಿರ ನಗದು ಹಾಗೂ ಫಲಕಗಳನ್ನು ಪಡೆಯಲಿದ್ದಾರೆ. ಪ್ರಶಸ್ತಿ ಪ್ರದಾನ ಸಮಾರಂಭ ಶೀಘ್ರ ನಡೆಯಲಿದೆ ಎಂದು ಅಕಾಡೆಮಿ ತಿಳಿಸಿದೆ.

▶7

# ಫಾಸ್ಟ್‌ಟ್ಯಾಗ್ ಪಾಸ್

ಪ್ರಜಾವಾಣಿ ವಾರ್ತೆ




ನವದೆಹಲಿ: ಫಾಸ್ಟ್‌ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ರೂಪಿಸಿದೆ. ವಾರ್ಷಿಕ ಪಾಸ್‌ನ ಮೌಲ್ಯ ₹3,000. ರಾಷ್ಟ್ರೀಯ ಹೆದ್ದಾರಿಗಳನ್ನು ಬಳಸಲು ವಾಣಿಜ್ಯೇತರ ವಾಹನಗಳಿಗೆ ಇದು ಅನುವು ಮಾಡಿಕೊಡಲಿದೆ.

ಈ ಪಾಸ್ ಪಡೆದವರು ತಮ್ಮ ಫಾಸ್ಟ್‌ಟ್ಯಾಗ್‌ಅನ್ನು ಮತ್ತೆ ಮತ್ತೆ ರೀಚಾರ್ಜ್ ಮಾಡಿಸುವ ಅಥವಾ ಹೆದ್ದಾರಿ ಶುಲ್ಕ ವಸೂಲಿ ಕೇಂದ್ರಗಳಲ್ಲಿ ಶುಲ್ಕ ಪಾವತಿಸುವ ಅಗತ್ಯ ಇರುವುದಿಲ್ಲ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. 200 ಟ್ರಿಪ್‌ಗಳವರೆಗೆ ಈ ಪಾಸ್ ಬಳಸಬಹುದು. ಅಷ್ಟು ಟ್ರಿಪ್ ಪೂರ್ಣಗೊಂಡ ನಂತರ ಪಾಸ್‌ಗಳನ್ನು ಮತ್ತೆ ರೀಚಾರ್ಜ್ ಮಾಡಿಕೊಳ್ಳಬಹುದು. ವಾಹನಗಳಲ್ಲಿ ಫಾಸ್ಟ್‌ಟ್ಯಾಗ್ ಇರುವವರು ಹೊಸದಾಗಿ ಖರೀದಿಸುವ ಅಗತ್ಯ ಇಲ್ಲ.

ಇನ್ನಷ್ಟು ವಿವರ ▶12

# ಶಿವಲಿಂಗಪ್ಪ, ದಿಲೀಪ್‌ಗೆ ಸಾಹಿತ್ಯ ಅಕಾಡೆಮಿ ಪುರಸ್ಕಾರ

ಒಂದನೇ ಪುಟದಿಂದ...

ಚಾಮರಾಜನಗರದ ದಿಲೀಪ್ ಕುಮಾರ್ ಕವಿ, ವಿಮರ್ಶಕ ಹಾಗೂ ಸಂಶೋಧಕರು. ಅವರು ಜನಿಸಿದ್ದು 1991ರ ಮಾರ್ಚ್ 16ರಂದು. ಮಹಾಕವಿ ಪಂಪನ ಎರಡೂ ಮಹಾಕಾವ್ಯಗಳನ್ನು ಕುರಿತು ಅವರು ಸರಣಿ ವಿಮರ್ಶಾ ಲೇಖನಗಳನ್ನು ಬರೆದಿದ್ದಾರೆ. ನಂತರ ಅವರು ವಚನ ಸಾಹಿತ್ಯ ಕುರಿತು ಬರೆದ ಲೇಖನಗಳನ್ನು 'ಶಬ್ದ ಸೋಪಾನ' ಹೆಸರಲ್ಲಿ ಪ್ರಕಟಿಸಿದ್ದಾರೆ. 'ಹಾರುವ ಹಂಸೆ' ಅವರ ಕವನ ಸಂಕಲನ.

ಶಿವಲಿಂಗಪ್ಪ ಹಂದಿಹಾಳು ಅವರು ಬಳ್ಳಾರಿ ಜಿಲ್ಲೆಯ ಹಂದಿಹಾಳು ಗ್ರಾಮದವರು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿದ್ದಾರೆ. 'ನಾನು ಮತ್ತು ಕನ್ನಡಕ' (ಕವನ ಸಂಕಲನ), 'ಎಳೆಬಿಸಿಲು' (ಮಕ್ಕಳ ಸಾಹಿತ್ಯ ಸಂಪದ), 'ಶಾವ್ರೋಲಿನ್' (ಇಂಗ್ಲಿಷ್ ಮೂಲ ಮಕ್ಕಳ ಕತೆಗಳು), 'ಆನಂದಾವಲೋಕನ' (ಭಾರತೀಯ ಮಕ್ಕಳ ಸಾಹಿತ್ಯ ಕುರಿತು), 'ಬಳ್ಳಾರಿಯ ಬೆಡಗು' (ಕಥಾ ಸಂಕಲನ), 'ದಿ ಯಂಗ್ ಸೈಂಟಿಸ್ಟ್' (ಮಕ್ಕಳ ಕಾದಂಬರಿ) ಸೇರಿದಂತೆ ಹಲವು ಕೃತಿಗಳನ್ನು ರಚಿಸಿದ್ದಾರೆ. ಹಲವು ಪ್ರಶಸ್ತಿಗಳನ್ನು ಪಡೆದಿದ್ದಾರೆ. ಕನ್ನಡ ವಿಭಾಗದಲ್ಲಿ ಬಾಲ ಸಾಹಿತ್ಯ ಪುರಸ್ಕಾರಕ್ಕೆ ಲೇಖಕರಾದ ಬಸು ಬೇವಿನಗಿಡದ, ಬೇಲೂರು ರಘುನಂದನ್ ಹಾಗೂ ಎಚ್. ಶಶಿಕಲಾ ತೀರ್ಪುಗಾರರಾಗಿದ್ದರು. ಯುವ ಪುರಸ್ಕಾರಕ್ಕೆ ಲೇಖಕರಾದ ಜಿ.ಎಂ. ಹೆಗಡೆ, ಪ್ರೊ.ವಿಕ್ರಂ ವಿಸಾಜಿ ಹಾಗೂ ವಿಮರ್ಶಕ ಟಿ.ಪಿ. ಅಶೋಕ ತೀರ್ಪುಗಾರರಾಗಿದ್ದರು.